## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು

**ಸಿಸಿ ನಂ.122/2024**

**ಫಿರ್ಯಾದುದಾರರುಃ** ಅಶ್ವಿನಿ, ಕೋಂ ರವಿ, ವಯಸು 35ವರ್ಷ,
ವಾಸಃ ನಂ.178, ಸ್ಟೋರ್‌ಸ್ಟ್ರೀಟ್,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ವೇದಕುಮಾರಿ, ಕೋಂ ಚಂದನ್,
ವಯಸ್ಸು 40 ವರ್ಷ, ವಾಸಃ ನಂ.192,
ಗಿರಿಜಮ್ಮ ನಿಲಯ, ಸ್ಟೋರ್‌ಸ್ಟ್ರೀಟ್,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಅಶ್ವಿನಿರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿಡಬ್ಲ್ಯು-1 ಅಶ್ವಿನಿ ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಅವರಿಂದ ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ರೂ.3,00,000/-ಗಳನ್ನು ನಾಲ್ಕು ತಿಂಗಳಲ್ಲಿ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ:3 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ತೀರುವಳಿಗಾಗಿ 04.01.2024 ರ ದಿನಾಂಕ ನಮೂದಿಸಿ ಆಕ್ಸಿಸ್ ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಃ 415195 ಅನ್ನು |

| | |
|---|---|
| | ರೂ.3,00,000/-ಗಳನ್ನು ಅವರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ |
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "Account closed" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 05.01.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 17.01.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸ್ ನಿಮಗೆ ಜಾರಿಯಾಗಿದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 10: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 25.02.2026.

Sd/-

(ಅನಿತ)

ANITHA

Digitally signed by ANITHA
Date: 2026.02.25 15:50:08 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ